**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–23/2021–22** **ದಿನಾಂಕ: 18/09/2021**

## –:ಸಭೆಯ ನಡವಳಿಗಳು:–

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 18/09/2021 ಶನಿವಾರದಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್–102 ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ.ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

| | |
|---|---|
| **1** | ಶ್ರೀ ಕೆ. ವಿಜಯ ಶೇಖರ್,<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್– 102 |
| **2** | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್–102. |
| **3** | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102 |
| **4** | ಶ್ರೀ ಕೆ. ವಿ. ಲೋಕೇಶ್, ವೆಟರಿನರಿ ಪರಿವೀಕ್ಷಕರು, ಬಿಬಿಎಂಪಿ. |
| **5** | ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| **6** | ಶ್ರೀ ಹರೀಶ್ ಎಮ್., ಟ್ಯಾಕ್ಸ್ ಇನ್ಸ್‌ಪೆಕ್ಟರ್, ವಾರ್ಡ್–102 |
| **7** | ಶ್ರೀ ಸಿದ್ದರಾಜು, ಸಹಾಯಕ ಅಭಿಯಂತರರು, ಬೆಸ್ಕಾಂ. |
| **8** | ಶ್ರೀ ದಿನೇಶ್, ಕಾಮಗಾರಿ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| **9** | ಶ್ರೀ ರಾಘವೇಂದ್ರ, ಕೊಳವೆ ಬಾವಿ ನಿರ್ವಹಣೆ ಗುತ್ತಿಗೆದಾರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| **10** | ಶ್ರೀ ಗೋವಿಂದಪ್ಪ, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ವಿದ್ಯುತ್ ವಿಭಾಗ, ಬಿಬಿಎಂಪಿ. |
| **11** | ಶ್ರೀ ಹೊನ್ನರಾಜು, ಎ.ಎಸ್.ಐ., ಬಸವೇಶ್ವರನಗರ ಪೊಲೀಸ್ ಠಾಣೆ. |
| **12** | ಶ್ರೀ ವೆಂಕಟೇಶ್, ಪಿ.ಸಿ., ಬಸವೇಶ್ವರನಗರ ಪೊಲೀಸ್ ಠಾಣೆ. |
| **13** | ಶ್ರೀ ಧರ್ಮಸಿಂಗ್ ಆರ್. ಪಿ.ಸಿ., ಕಾಮಾಕ್ಷೀಪಾಳ್ಯ ಪೊಲೀಸ್ ಠಾಣೆ. |
| **14** | ಶ್ರೀ ದರ್ಶನ್ ಕೆ.ಆರ್., ವಾರ್ಡ್ ಮಾರ್ಷಲ್, ವಾರ್ಡ್–102. |
| **15** | ಶ್ರೀ ಹೇಮಂತ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **16** | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **17** | ಶ್ರೀ ರಾಜ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **18** | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **19** | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **20** | ಶ್ರೀ ರಂಗನಾಥ್ ಸಿ., ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |

ಮು.ತಿ.ನೋ.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಂದಿನಂತೆ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳುತ್ತಿದ್ದು, ಕಳೆದ 15 ದಿನಗಳಿಂದ 04 ಸಂಖ್ಯೆ ಆಕ್ಟಿವ್ ಕೇಸ್‌ಗಳು ಕಂಡುಬಂದಿದ್ದು ಹೋಮ್ ಐಸೋಲೇಷನ್ ಮಾಡಲಾಗಿರುತ್ತದೆ, ಹಾಗೂ ಯಾವುದೇ ಡೆತ್ ಕೇಸ್‌ಗಳು ಕಂಡುಬಂದಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ವ್ಯಾಕ್ಸಿನೇಷನ್ ಪ್ರಗತಿಯ ಬಗ್ಗೆ ಮಾಹಿತಿ ನೀಡುವಂತೆ ಸಭೆಯಲ್ಲಿ ಕೇಳಿದರು.
- ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ವ್ಯಾಕ್ಸಿನೇಷನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸುಮಾರು 2 ಸಾವಿರ ಜನರಿಗೆ ವ್ಯಾಕ್ಸಿನೇಷನ್ ಹಾಕುವಂತೆ ಟಾರ್ಗೆಟ್ ನೀಡಿರುತ್ತಾರೆ. ಸದರಿ ಕಾರ್ಯಕ್ರಮವು ಯಶಸ್ವಿಯಾಗಿದ್ದು, ಈ ಕಾರ್ಯದಲ್ಲಿ ಎಲ್ಲಾ ಸದಸ್ಯರು ತಮ್ಮ ವ್ಯಾಪ್ತಿಯಲ್ಲಿ ಶ್ರಮವಹಿಸಿರುತ್ತಾರೆ. ಎಂದು ಎಲ್ಲರಿಗೂ ಶುಭಾಶಯ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಕೋವಿಡ್ ಲಕ್ಷಣಗಳನ್ನು ಗುರುತಿಸಿ ಸರಿಯಾದ ರೀತಿಯಲ್ಲಿ ಚಿಕಿತ್ಸೆ ನೀಡಿ ಕೋವಿಡ್ ರೋಗ ನಿಯಂತ್ರಿಸಲು ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.
- ಎಲ್ಲಾ ಸದಸ್ಯರು ಮಾತನಾಡುತ್ತಾ, ಕೋವಿಡ್‌ನಿಂದ ಮೃತಪಟ್ಟ ರೋಗಿಯ ಕುಟುಂಬದ ವಾರಸುದಾರರಿಗೆ ಪರಿಹಾರ ನೀಡುವಂತೆ ಕೋರಿದರು. ವಾರ್ಡ್ ವ್ಯಾಪ್ತಿಯಲ್ಲಿನ ಸಭೆ ಸಮಾರಂಭಗಳು ನಡೆಯದಂತೆ ಕ್ರಮವಹಿಸಲು ಕಲ್ಯಾಣ ಮಂಟಪಗಳು ಹಾಗೂ ಪಾರ್ಟಿ ಹಾಲ್‌ಗಳಿಗೆ ನೋಟೀಸ್ ನೀಡಲು ಕ್ರಮ ತೆಗೆದುಕೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಇದರ ಬಗ್ಗೆ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಮಾಹಿತಿಯನ್ನು ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

2) **ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಅಂದಾನಪ್ಪ ಬಡಾವಣೆಯಲ್ಲಿ ರಸ್ತೆಗಳಲ್ಲಿ ನಾಮಫಲಕಗಳನ್ನು ಸರಿಪಡಿಸಿಕೊಡುವಂತೆ ಎಂದು ಸಭೆಯಲ್ಲಿ ಕೋರಿದರು.
- ಸಹಾಯಕ ಅಭಿಯಂತರರು ವಾರ್ಡ್-102 ರವರು ಮಾತನಾಡುತ್ತಾ, ಈಗಾಗಲೇ ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ದೂರಿಗೆ ಸಂಬಂಧಿಸಿದ ಸ್ಥಳ ಪರಿಶೀಲಿಸಿ ಶೀಘ್ರವಾಗಿ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, 4ನೇ ಇ ಅಡ್ಡರಸ್ತೆ, ಮಾರುತಿನಗರದಲ್ಲಿ ಡಾಂಬರೀಕರಣವನ್ನು ಅರ್ಧಕ್ಕೆ ನಿಲ್ಲಿಸಿರುವುದಾಗಿ ಸಭೆಯಲ್ಲಿ ದೂರಿದರು.
- ಸಹಾಯಕ ಅಭಿಯಂತರರು ವಾರ್ಡ್-102 ರವರು ಮಾತನಾಡುತ್ತಾ, ಸದರಿ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಒಳಚರಂಡಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಸದರಿ ಕಾಮಗಾರಿಯು ಮುಗಿದ ನಂತರ ಡಾಂಬರೀಕರಣವನ್ನು ಪೂರ್ಣಗೊಳಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಪ್ರತೀ ದಿನ ಹಸಿ ಕಸ ಹಾಗೂ ಒಣ ಕಸಗಳನ್ನು ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡುವಂತೆ ಸಾರ್ವಜನಿಕರಿಗೆ ಮನವರಿಕೆ ಮಾಡಿಸುವುದು ಹಾಗೂ ವಾರ್ಡ್ ಮಾರ್ಷಲ್ಸ್‌ಗಳು ಬ್ಲಾಕ್ ಸ್ಪಾಟ್‌ಗಳಲ್ಲಿ ಗಸ್ತು ತಿರುಗುವಂತೆ ಸಭೆಯಲ್ಲಿ ಸೂಚಿಸಿದರು.
- ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಈಗಾಗಲೇ ಸಾರ್ವಜನಿಕರಲ್ಲಿ ಪ್ರತಿ ದಿನ ಮನವರಿಕೆ ಮಾಡಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಮ್ಯಾನ್‌ಹೋಲ್‌ಗಳಿಂದ ತೆಗೆದ ಸಿಲ್ಟ್‌ಗಳನ್ನು ಆಗಿಂದಾಗ್ಗೆ ತೆರವುಗೊಳಿಸಲು ಕ್ರಮವಹಿಸುವಂತೆ ಸಭೆಯಲ್ಲಿ ಸೂಚಿಸಿದರು.
- ಶ್ರೀಮತಿ ಪ್ರೇಮ ಮತ್ತು ಶ್ರೀ ರಾಜ್‌ಕುಮಾರ್ ಸದಸ್ಯರು ರವರು ಮಾತನಾಡುತ್ತಾ, ಗಂಗಣ್ಣ ಲೇಔಟ್ ಮತ್ತು ಸಣ್ಣಕ್ಕಿ ಬಯಲಿನಲ್ಲಿ ಬೋರ್‌ವೆಲ್ ಮೋಟಾರ್ ಮತ್ತು ಪ್ಯಾನೆಲ್ ಬಾಕ್ಸ್‌ಗಳನ್ನು ದುರಸ್ಥಿಗೊಳಿಸುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ರಾಘವೇಂದ್ರ, ಕೊಳವೆ ಬಾವಿ ನಿರ್ವಹಣೆ ಗುತ್ತಿಗೆದಾರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಮಾತನಾಡುತ್ತಾ, ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ದಿನಗಳಲ್ಲಿ ಸೂಕ್ತ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

9) **ಪೊಲೀಸ್ ವಿಭಾಗದ ಬಗ್ಗೆ:-**

- ಶ್ರೀ ಹೇಮಂತ್ ಸದಸ್ಯರು ಮಾತನಾಡುತ್ತಾ, ಮಾರುತಿನಗರದ ಮುನೇಶ್ವರ ದೇವಸ್ಥಾನದ ಹತ್ತಿರ ಮದ್ಯವ್ಯಸನಿಗಳ ಹಾವಳಿ ಹೆಚ್ಚಾಗಿರುವುದಾಗಿ ಸಭೆಯಲ್ಲಿ ದೂರಿದರು.
- ಶ್ರೀಮತಿ ಪ್ರೇಮ ಸದಸ್ಯರು ರವರು ಮಾತನಾಡುತ್ತಾ, ಗಂಗಣ್ಣ ಬಡಾವಣೆಯ ವ್ಯಾಪ್ತಿಯಲ್ಲಿ ಕೆಂಪೇಗೌಡ ಶಾಲೆಯ ಹತ್ತಿರ, ಸಣ್ಣಕ್ಕಿ ಬಯಲು ತೋಟದ ರಸ್ತೆಯಲ್ಲಿ ದ್ವಿಚಕ್ರ ವಾಹನಗಳಲ್ಲಿ ಅತೀಯಾದ ವೇಗದಲ್ಲಿ ಸಂಚರಿಸುತ್ತಿರುತ್ತಾರೆ, ಇದನ್ನು ತಡೆಗಟ್ಟಲು ಸೂಕ್ತ ಕ್ರಮವಹಿಸುವಂತೆ ಪೊಲೀಸರಲ್ಲಿ ಕೋರಿದರು.
- ಶ್ರೀ ಹೊನ್ನರಾಜು, ಎ.ಎಸ್.ಐ., ಬಸವೇಶ್ವರನಗರ ಪೊಲೀಸ್ ಠಾಣೆ ರವರು ಮಾತನಾಡುತ್ತಾ, ಸದರಿ ವಿಷಯವಾಗಿ ಸೂಕ್ತ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ಮತ್ತು ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

| | |
|---|---|
| **ಕಾರ್ಯದರ್ಶಿ** | **ನೋಡೆಲ್ ಅಧಿಕಾರಿಗಳು** |
| ಹಾಗೂ ಸಹಾಯಕ ಅಭಿಯಂತರರು, | ವಾರ್ಡ್ ಸಮಿತಿ, ವಾರ್ಡ್-102 |
| ವಾರ್ಡ್ ಸಂಖ್ಯೆ-102 | |

<u>ಪ್ರತಿಯನ್ನು</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

W-102 ವೃಷಭಾವತಿನಗರ

ದಿನಾಂಕ: 18/09/2021

ಬೆಳಿಗ್ಗೆ = 10.00 ಘಂಟೆಗೆ.

ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಹಾಗೂ RWAS. ಸದಸ್ಯರುಗಳ ಹಾಜರಾತಿ

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 1) | ಕೆ. ವಿಜಯಕುಮಾರ್ | ನೋಡಲ್ ಅಧಿಕಾರಿ | 9448670084 | [signature] 18/9/2021 |
| 2) | ಪ್ರಕಾಶ್. ಜಿ. | W-102, ಕಾರ್ಯದರ್ಶಿ | 9845236847 | [signature] 18/9/2021 |
| 3) | ರಂಗನಾಥ್. H | AEE, Nagapura | 9480685316 | |
| 4) | ಗೋವಿಂದರಾಜು | SHI | 9845512187 | G. L. [signature] |
| 5) | ಬಾಬು | JHI | 9632549664 | S. Babu |
| 6) | ಹರೀಶ್. M | T.I | 7411692135 | |
| 7) | ಸಿದ್ದರಾಜು | AE, Bescom | 9449870177 | [signature] |
| 8) | ಕಿರಣ್ ನಾಯಕ್ | AE BWSSB | 984544074 | [signature] |
| 9) | ಲೋಕೇಶ್ | Veternary | 9480683056 | [signature] |
| 10) | ದರ್ಶನ್. ಕೆ. ಆರ್ | ward-102 Marshal | 7975160318 | Darshan. K. R |
| 11) | ಹೇಮಂತ್ ಕುಮಾರ್ | RWAs | 9448362208 | [signature] |

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 12) | ಪ್ರೇಮ. | RWA 9 | 9632728915 | Prerna |
| 13) | ಸಿದ್ದಗಂಗಮ್ಮ | —॥— | 990239918 | |
| 14) | ಗೌರಮ್ಮ | —॥— | 9740249333 | |
| 15) | ರಾಜ್ ಕುಮಾರ್ | —॥— | 8553779344 | Rajk |
| 16) | ಚಂದ್ರಪ್ಪ | —॥— | 9845763281 | [signature] |
| 17) | ದೇವರಾಜು. | —॥— | 9632584986 | ದೇವರಾಜ |
| 18) | ರಂಗನಾಥ್. | —॥— | 9341199998 | [signature] - C |
| 19) | ರಾಘವೇಂದ್ರ | BWSSB Contractor | 9986449988. | [signature] |
| 20. | ಗೋಪಾಲಂದಪ್ಪ | Lights | 9740378835 | [signature] |
| 21) | ಕೆ.ವಿ ಮಾದಪ್ಪ | —॥— | 9731769515 | [signature] |
| 22) | ಹುಮೇಶಲಿಂಗ ಆರ್ | Police (PC) | 9008358300 | [signature] PC 12621 |
| 23) | ಶಿವನಾಗರಾಜು | ASI | 9844292277 | [signature] |
| 24) | ವೆಂಕಟಪ್ಪ | H 355 | 9964446026 | ವೆಂಕಟಪ್ಪ |
| 25) | | | | |
| 26) | | | | |
| 27) | | | | |
| 28) | | | | |